# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 831
ಸದಸ್ಯರ ಹೆಸರು : ಶ್ರೀ ಹೆಚ್.ಎಸ್. ಗೋಪಿನಾಥ
(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 12.12.2023
ಉತ್ತರಿಸುವ ಸಚಿವರು : ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು.

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸಣ್ಣ ಕೈಗಾರಿಕೆಗಳನ್ನು ಹೆಚ್ಚು ಸ್ಥಾಪನೆ ಮಾಡದೆ ಅಸ್ತಿತ್ವದಲ್ಲಿರುವ ಕೈಗಾರಿಕೆಗಳಿಗೆ ಉತ್ತೇಜನ ನೀಡಲು ಸರ್ಕಾರದಿಂದ ನೀಡಿರುವ ಅನುದಾನ ಎಷ್ಟು; | ರಾಜ್ಯದಲ್ಲಿ ಅಸ್ತಿತ್ವದಲ್ಲಿರುವ ಸಣ್ಣ ಕೈಗಾರಿಕೆಗಳನ್ನು ಉತ್ತೇಜನ ನೀಡಲು ಸರ್ಕಾರದಿಂದ ಯಾವುದೇ ಅನುದಾನ ನೀಡಲಾಗುವುದಿಲ್ಲ.<br><br>ಆದರೆ ಹೊಸ ಘಟಕಗಳಿಗೆ ಮತ್ತು ಅಸ್ತಿತ್ವದಲ್ಲಿರುವ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳು ತಮ್ಮ ಘಟಕವನ್ನು ವಿಸ್ತರಿಸಿದಲ್ಲಿ, / ಆಧುನೀಕರಣಗೊಳಿಸಿದಲ್ಲಿ/ ವೈವಿದ್ವೀಕರಣಗೊಳಿಸಿದಲ್ಲಿ ಕರ್ನಾಟಕ ಕೈಗಾರಿಕಾ ನೀತಿ 2020-25 ರನ್ವಯ ಷರತ್ತಿಗೆ ಹಾಗೂ ಅರ್ಹತೆಗೊಳಪಟ್ಟು ಪ್ರೋತ್ಸಾಹ ಮತ್ತು ರಿಯಾಯಿತಿಗಳನ್ನು ನೀಡಲಾಗುತ್ತದೆ. |
| ಆ) | ಸಣ್ಣ ಕೈಗಾರಿಕೆಗಳಿಗೆ ಸರ್ಕಾರದಿಂದ ಭೂಮಿ ಹಾಗೂ ಕಾರ್ಖಾನೆ ನಿರ್ಮಾಣ ಮಾಡಲು ಹೆಚ್ಚು ಅನುದಾನವನ್ನು ನೀಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ; | ಸಣ್ಣ ಕೈಗಾರಿಕೆಗಳು ತಮ್ಮ ಘಟಕ ಸ್ಥಾಪಿಸಲು ಅನುವಾಗುವಂತೆ ನೂತನ ಸರ್ಕಾರವು 2023-24 ನೇ ಸಾಲಿನ ಆಯವ್ಯಯದಲ್ಲಿ ಈ ಕೆಳಗಿನ ಘೋಷಣೆಗಳನ್ನು ಮಾಡಿರುತ್ತದೆ:<br><br>**ಪ್ಯಾರಾ-262:** ಸಣ್ಣ ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ರಾಜ್ಯದ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ವತಿಯಿಂದ ಹುಬ್ಬಳ್ಳಿ, ಕಲ್ಬುರ್ಗಿಯ ಚಿತ್ತಾಪುರ, ಉತ್ತರಕನ್ನಡದ ಕೋಡ್ಕಣಿ, ಬೆಳಗಾವಿಯ ಕಣಗಲ, ಚಾಮರಾಜನಗರದ ಬದನಗುಪ್ಪೆ, ವಿಜಯಪುರದ ಇಂಡಿ ಮತ್ತು ಯಾದಗಿರಿಯ ಶಹಪುರ ಹೀಗೆ ಏಳು ಸ್ಥಳಗಳಲ್ಲಿ ಹೊಸದಾಗಿ ಕೈಗಾರಿಕಾ ವಸಹತುಗಳನ್ನು ಹಂತ ಹಂತವಾಗಿ ಸ್ಥಾಪಿಸಲಾಗುವುದು ಎಂದು ಘೋಷಿಸಲಾಗಿದೆ.<br><br>ಅಲ್ಲದೇ ಈಗಾಗಲೇ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದಿಂದ ಬೇಡಿಕೆ ಇರುವ ಸ್ಥಳಗಳಲ್ಲಿ ಕೈಗಾರಿಕಾ ವಸಾಹತುಗಳನ್ನು ಸ್ಥಾಪಿಸಿ, ನಿವೇಶನ ಮತ್ತು ಶೆಡ್ ಗಳನ್ನು ನಿರ್ಮಿಸಿ ಉದ್ಯಮಶೀಲರಿಗೆ ಹಂಚಿಕೆ ಮಾಡಿದೆ.<br><br>ಸಣ್ಣ ಕೈಗಾರಿಕೆಗಳಿಗೆ ಸರ್ಕಾರದಿಂದ ಹೆಚ್ಚು ಅನುದಾನವನ್ನು ನೀಡಲು ಸರ್ಕಾರ ಕೈಗಾರಿಕಾ ನೀತಿ 2020-25 ನ್ನು ರೂಪಿಸಿ ಅನುಷ್ಠಾನಗೊಳಿಸುತ್ತಿದೆ. ಇದರ ಪ್ರಕಾರ ಉದ್ಯಮಶೀಲರು ಸ್ಥಾಪಿಸುವ ಹೊಸ ಕೈಗಾರಿಕಾ ಘಟಕಗಳಿಗೆ ಅಥವಾ ಹಾಲಿ ಇರುವ ಕೈಗಾರಿಕಾ ಘಟಕಗಳನ್ನು ವಿಸ್ತರಿಸಿದಲ್ಲಿ/ ಆಧುನೀಕರಿಸಿದಲ್ಲಿ/ ವೈವಿದ್ವೀಕರಿಸಿದಲ್ಲಿ ಅವುಗಳಿಗೆ ಭೂಮಿ, ಕಟ್ಟಡ, ಯಂತ್ರೋಪಕರಣಗಳನ್ನು ಆಧರಿಸಿ, ವಲಯ ಮತ್ತು ಎಂ.ಎಸ್.ಎಂ.ಇ ವರ್ಗವನ್ನು ಆಧರಿಸಿ ಶೇ 10% ರಿಂದ ಶೇ 40% ರವರೆಗೆ ಗರಿಷ್ಟ ರೂ.1,05,00,000 ಬಂಡವಾಳ ಹೂಡಿಕೆ ಸಹಾಯಧನ ನೀಡಲಾಗುವುದು. |

| | | |
|---|---|---|
| ಇ) | ಸಣ್ಣ ಕೈಗಾರಿಕೆಗಳಿಗೆ ಸರ್ಕಾರದಿಂದ ಹೆಚ್ಚಿನ ಪ್ರೋತ್ಸಾಹ ನೀಡಿದಲ್ಲಿ ಈ ಕಾರ್ಖಾನೆಗಳಲ್ಲಿ ಹೆಚ್ಚು ಉದ್ಯೋಗವಕಾಶ ಸೃಷ್ಟಿಯಾಗಲಿದ್ದು, ಇದಕ್ಕೆ ಸರ್ಕಾರ ಕೂಡಲೇ ಕ್ರಮಕೈಗೊಳ್ಳುವುದೇ? | ಸಣ್ಣ ಕೈಗಾರಿಕೆಗಳಿಗೆ ಪ್ರೋತ್ಸಾಹ ನೀಡುವ ಮತ್ತು ಉದ್ಯೋಗ ಸೃಷ್ಟಿ ಮಾಡುವ ಉದ್ದೇಶದಿಂದ ಅನೇಕ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸುತ್ತಿದೆ. ಅವುಗಳ ವಿವರಗಳು ಈ ಕೆಳಗಿನಂತಿವೆ.<br><br>1. ಕೇಂದ್ರ ಸರ್ಕಾರದ ಪ್ರಧಾನಮಂತ್ರಿಗಳ ಉದ್ಯೋಗ ಸೃಜನ ಯೋಜನೆಯಡಿ ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಉತ್ಪಾದನಾ ಘಟಕಗಳಿಗೆ ಗರಿಷ್ಟ ಸಾಲ ರೂ. 50 ಲಕ್ಷಗಳವರೆಗೆ ಸೇವಾಘಟಕಗಳಿಗೆ ರೂ.20 ಲಕ್ಷಗಳವರೆಗೆ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯ ಒದಗಿಸಿ ಸಣ್ಣ ಉದ್ಯಮಗಳನ್ನು ಸ್ಥಾಪಿಸಿ ಸ್ವಯಂ ಉದ್ಯೋಗ ಕೈಗೊಳ್ಳಲು ಅನುಕೂಲ ಒದಗಿಸಲಾಗುವುದು ಹಾಗೂ ಯೋಜನಾ ವೆಚ್ಚದ ಮೇಲೆ ಶೇ. 15 ರಿಂದ ಶೇ.35 ರವರೆಗೆ ಗರಿಷ್ಟ ರೂ.7.50 ಲಕ್ಷದಿಂದ ರೂ.17.50 ಲಕ್ಷದವರೆಗೆ ಸಹಾಯಧನ ನೀಡಲಾಗುತ್ತಿದೆ.<br><br>2. ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯ ಮೂಲಕ ಸೂಕ್ಷ್ಮ, ಮತ್ತು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ರೂ.5.00 ಕೋಟಿಗಳವರೆಗೆ ಸಾಲ ಪಡೆದು ನಿಗದಿತ ಸಮಯದಲ್ಲಿ ಮರು ಪಾವತಿ ಮಾಡಿದ ಅತಿ ಸಣ್ಣ ಮತ್ತು ಸಣ್ಣ ಕೈಗಾರಿಕಾ ಘಟಕಗಳಿಗೆ 5 ವರ್ಷಗಳ ಅವಧಿಗೆ ಶೇಕಡ 6 ರಂತೆ ಬಡ್ಡಿ ಸಹಾಯಧನ ನೀಡಲಾಗುವುದು.<br><br>3. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಉದ್ಯಮಶೀಲರಿಗೆ ವಿಶೇಷ ಘಟಕ ಉಪ ಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿಯಲ್ಲಿ ಶೇ 75 ರಿಯಾಯಿತಿ ದರದಲ್ಲಿ ಕೈಗಾರಿಕಾ ನಿವೇಶನಗಳನ್ನು ಮತ್ತು ಕೈಗಾರಿಕಾ ಶೆಡ್‌ಗಳನ್ನು ನೀಡಲಾಗುತ್ತಿದೆ. ನಿವೇಶನದ ಗರಿಷ್ಟ ವಿಸ್ತೀರ್ಣ 2 ಎಕರೆಗಳು<br><br>4. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಉದ್ಯಮಶೀಲರಿಗೆ ವಿಶೇಷ ಘಟಕ ಉಪಯೋಜನೆ ಮತ್ತು ಗಿರಿಜನ ಉಪ ಯೋಜನೆಯಡಿಯಲ್ಲಿ ಸ್ವಯಂ ಉದ್ಯೋಗ ಕೈಗೊಳ್ಳಲು ಬ್ಯಾಂಕಿನಿಂದ ಸಾಲ ಒದಗಿಸಿ ಯೋಜನಾ ವೆಚ್ಚದ ಮೇಲೆ ಶೇ 60 ರಷ್ಟು ಗರಿಷ್ಟ ರೂ.5.00 ಲಕ್ಷ ಸಹಾಯಧನ ನೀಡಲಾಗುತ್ತಿದೆ.<br><br>5. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಮೊದಲ ಪೀಳಿಗೆಯ ಉದ್ಯಮಿದಾರರು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಪಡೆದು ಸ್ಥಾಪಿಸುವ ಹೊಸ ಘಟಕಗಳಿಗೆ ಗರಿಷ್ಟ ರೂ.10.00 ಕೋಟಿ ಯೋಜನಾ ವೆಚ್ಚದಲ್ಲಿ The Debt Equity Ratio 2:1 ಪ್ರಕಾರ (2/3 ರಷ್ಟು ಬ್ಯಾಂಕ್/ ಹಣಕಾಸು ಸಂಸ್ಥೆಗಳಿಂದ ಸಾಲ ಮತ್ತು 1/3 ಪ್ರವರ್ತಕರ ಬಂಡವಾಳ) ಘಟಕಕ್ಕೆ ಪ್ರವರ್ತಕ ಬಂಡವಾಳ ಹೂಡಿಕೆಯ 1/3 ರಲ್ಲಿ ಶೇ.50ರಷ್ಟು ಬಡ್ಡಿ ರಹಿತ ಗರಿಷ್ಟ ರೂ.75 ಲಕ್ಷ ಸಾಫ್ಟ್ ಸೀಡ್ ಕ್ಯಾಪಿಟಲ್ ಆರ್ಥಿಕ ಸಹಾಯ ನೀಡಲಾಗುತ್ತಿದೆ.<br><br>6. ಕರ್ನಾಟಕ ರಾಜ್ಯ ಕೈಗಾರಿಕಾ ನೀತಿ 2020-25 ರಂತೆ ಕೆಳಕಾಣಿಸಿದ ಪ್ರೋತ್ಸಾಹ ಮತ್ತು ರಿಯಾಯಿತಿ ಸೌಲಭ್ಯಗಳನ್ನು ಅರ್ಹ ಕೈಗಾರಿಕೆಗಳಿಗೆ ನೀಡಿ ಉತ್ತೇಜಿಸಲಾಗುತ್ತಿದೆ. |

| | | |
|---|---|---|
| | | 1. ಮುದ್ರಾಂಕ ಶುಲ್ಕ ವಿನಾಯಿತಿ<br>2. ನೋಂದಣಿ ಶುಲ್ಕ ರಿಯಾಯಿತಿ.<br>3. ಬಂಡವಾಳ ಹೂಡಿಕೆ ಸಹಾಯಧನ<br>4. ಕಿರು ಮತ್ತು ಸಣ್ಣ ಕೈಗಾರಿಕೆಗಳಿಗೆ ವಿದ್ಯುತ್ ಸಹಾಯಧನ<br>5. ಭೂ ಪರಿವರ್ತನಾ ಶುಲ್ಕ ಮರುಪಾವತಿ.<br>6. ರಫ್ತು ಆಧಾರಿತ ಘಟಕಗಳಿಗೆ ರಿಯಾಯಿತಿ.<br>7. ತ್ಯಾಜ್ಯ ಸಂಸ್ಕರಣಾ ಘಟಕಗಳ ಸ್ಥಾಪನೆಗೆ ಸಹಾಯಧನ.<br>8. ವಿದ್ಯುತ್ ತೆರಿಗೆ ವಿನಾಯಿತಿ<br>9. ತಾಂತ್ರಿಕ ಉನ್ನತೀಕರಣ, ಗುಣಮಟ್ಟ ಪ್ರಮಾಣ ಪತ್ರ ಸಹಾಯಧನ<br>10. ಮಳೆನೀರು ಕೊಯ್ಲು / ಸಂರಕ್ಷಣೆ ಸಹಾಯಧನ<br>11. ತಂತ್ರಜ್ಞಾನ ಉನ್ನತೀಕರಣಕ್ಕೆ ಬಡ್ಡಿ ಸಹಾಯಧನ |

ಸಿಐ 238 ಸಿಎಸ್‌ಸಿ 2023

(ಶರಣಬಸಪ್ಪ ದರ್ಶನಾಪೂರ)
ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ
ಉದ್ದಿಮೆಗಳ ಸಚಿವರು